**All India Radio: Bangalore**
**National Bulletin In Kannada**
**11.05.2025 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**11.05.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

**೧. ಭಾರತದೊಂದಿಗಿನ ಒಪ್ಪಂದದ ಹೊರತಾಗಿಯೂ ಪಾಕಿಸ್ತಾನದಿಂದ ಕದನ ವಿರಾಮ ಉಲ್ಲಂಘನೆ**

**೨. ಕದನ ವಿರಾಮ ಒಪ್ಪಂದ ಬೆನ್ನಲ್ಲೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಉನ್ನತಮಟ್ಟದ ಸಭೆ**

**೩. ಪಾಕಿಸ್ತಾನದೊಂದಿಗೆ ಗಡಿ ಹಂಚಿಕೊಳ್ಳುವ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳೊಂದಿಗೆ ಕೇಂದ್ರ ಗೃಹ ಕಾರ್ಯದರ್ಶಿ ಸಮಾಲೋಚನೆ; ಜಾಗರೂಕತೆ ಕಾಯ್ದುಕೊಳ್ಳಲು ಸೂಚನೆ**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಪರಿಷ್ಕೃತ ವೇಳಾಪಟ್ಟಿ ಕುರಿತಂತೆ ಇಂದು ಬಿಸಿಸಿಐ-ಐಪಿಲ್ ಮಂಡಳಿ ಅಧಿಕಾರಿಗಳ ನಡುವೆ ಚರ್ಚೆ**

**<><*<><>*><>**

ಭಾರತ-ಪಾಕಿಸ್ತಾನ ನಿನ್ನೆ ಕದನ ವಿರಾಮ ಒಪ್ಪಂದಕ್ಕೆ ಬಂದ ನಂತರ, ಪಾಕಿಸ್ತಾನದಿಂದ ಪದೇ ಪದೇ ಒಪ್ಪಂದದ ಉಲ್ಲಂಘನೆಗಳು ನಡೆದಿವೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಈ ಉಲ್ಲಂಘನೆಗಳಿಗೆ ಸಶಸ್ತ್ರ ಪಡೆಗಳು ಸಮರ್ಪಕ ಮತ್ತು ಸೂಕ್ತ ಪ್ರತಿಕ್ರಿಯೆ ನೀಡುತ್ತಿವೆ. ನವದೆಹಲಿ ಈ ಉಲ್ಲಂಘನೆಗಳನ್ನು ಬಹಳ ಗಂಭೀರವಾಗಿ ಪರಿಗಣಿಸುತ್ತದೆ ಎಂದು ಹೇಳಿದರು. ಈ ಉಲ್ಲಂಘನೆಗಳನ್ನು ಪರಿಹರಿಸಲು ಮತ್ತು ಪರಿಸ್ಥಿತಿಯನ್ನು ಗಂಭೀರತೆ ಮತ್ತು ಜವಾಬ್ದಾರಿಯಿಂದ ನಿಭಾಯಿಸಲು ಭಾರತ ಪಾಕಿಸ್ತಾನಕ್ಕೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕರೆ ನೀಡಿದೆ. ಸಶಸ್ತ್ರ ಪಡೆಗಳು ಪರಿಸ್ಥಿತಿಯ ಬಗ್ಗೆ ತೀವ್ರ ಜಾಗರೂಕತೆಯನ್ನು ಕಾಯ್ದುಕೊಂಡಿವೆ. ಅಂತಾರಾಷ್ಟ್ರೀಯ ಗಡಿ ಹಾಗೂ ನಿಯಂತ್ರಣ ರೇಖೆಯಲ್ಲಿ ಉಲ್ಲಂಘನೆಗಳ ಪುನರಾವರ್ತನೆಯ ಯಾವುದೇ ನಿದರ್ಶನಗಳನ್ನು ಬಲವಾಗಿ ಎದುರಿಸಲು ಅವರಿಗೆ ಸೂಚನೆಗಳನ್ನು ನೀಡಲಾಗಿದೆ ಎಂದು ಅವರು ಹೇಳಿದರು. ಪಾಕಿಸ್ತಾನ ಈ ಪರಿಸ್ಥಿತಿಯನ್ನು ಸರಿಯಾಗಿ ಅರ್ಥಮಾಡಿಕೊಳ್ಳಬೇಕು ಮತ್ತು ಈ ಒಳನುಸುಳುವಿಕೆಯನ್ನು ನಿಲ್ಲಿಸಲು ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ವಿದೇಶಾಂಗ ಕಾರ್ಯದರ್ಶಿ ಹೇಳಿದರು.

<><*<><>*><>

ಇದಕ್ಕೂ ಮೊದಲು, ಭಾರತ ಮತ್ತು ಪಾಕಿಸ್ತಾನಗಳು ಕದನ ವಿರಾಮವನ್ನು ಘೋಷಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಗುಂಡಿನ ದಾಳಿ ಮತ್ತು ಮಿಲಿಟರಿ ಕ್ರಮವನ್ನು ನಿಲ್ಲಿಸಲು ಒಪ್ಪಿಕೊಂಡಿದ್ದವು. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ನವದೆಹಲಿಯಲ್ಲಿ ಈ ಘೋಷಣೆ ಮಾಡಿ, ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರು ನಿನ್ನೆ ಕದನ ವಿರಾಮಕ್ಕೆ ಕರೆ ನೀಡಿದರು, ನಂತರ ಚರ್ಚೆಗಳು ನಡೆದು, ಒಪ್ಪಂದಕ್ಕೆ ಬರಲಾಯಿತು ಎಂದು ಅವರು ಹೇಳಿದರು.

ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮವನ್ನು ಎರಡೂ ದೇಶಗಳ ನಡುವೆ ನೇರವಾಗಿ ರೂಪಿಸಲಾಯಿತು ಎಂದು ಮೂಲಗಳು ತಿಳಿಸಿವೆ.

ಭವಿಷ್ಯದಲ್ಲಿ ಯಾವುದೇ ಭಯೋತ್ಪಾದಕ ಕೃತ್ಯವನ್ನು ತನ್ನ ವಿರುದ್ಧದ ಯುದ್ಧ ಸಾರುವ ಕೃತ್ಯವೆಂದು ಪರಿಗಣಿಸಲಾಗುತ್ತದೆ ಮತ್ತು ಭಾರತ ಅದಕ್ಕೆ ತಕ್ಕಂತೆ ಪ್ರತಿಕ್ರಿಯಿಸುತ್ತದೆ ಎಂದು ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಲಾಗಿದೆ.

<><*<><>*><>

ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮ ಘೋಷಣೆಯ ನಂತರ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿರುವ ತಮ್ಮ ನಿವಾಸದಲ್ಲಿ ಉನ್ನತ ಮಟ್ಟದ ಸಭೆಯನ್ನು ನಡೆಸಿದರು. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ರಕ್ಷಣಾ ಸಚಿವ ರಾಜನಾಥ್ ಸಿಂಗ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ರಕ್ಷಣಾ ಸಿಬ್ಬಂದಿ ಮುಖ್ಯಸ್ಥರು ಮತ್ತು ಮೂರು ಸೇವೆಗಳ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಿದ್ದರು.

<><*<><>*><>

ಕೇಂದ್ರ ಗೃಹ ಕಾರ್ಯದರ್ಶಿ ಗೋವಿಂದ ಮೋಹನ್ ನಿನ್ನೆ ಪಾಕಿಸ್ತಾನದೊಂದಿಗೆ ಗಡಿ ಹಂಚಿಕೊಳ್ಳುವ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳೊಂದಿಗೆ ವೀಡಿಯೊ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದರು. ಸಭೆಯಲ್ಲಿ ಗಡಿಯಾಚೆಯಿಂದ ಯಾವುದೇ ಗುಂಡಿನ ದಾಳಿ ನಡೆದರೆ ತಮ್ಮ ಪ್ರದೇಶಗಳಲ್ಲಿ ಜಾಗರೂಕರಾಗಿರಲು ಮತ್ತು ನಾಗರಿಕ ರಕ್ಷಣಾ ಕಾರ್ಯವಿಧಾನವನ್ನು ಸಕ್ರಿಯಗೊಳಿಸಲು ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

<><*<><>*><>

ಭಾರತದ ವಿರುದ್ಧ ಪ್ರಚೋದನಕಾರಿ ಕ್ರಮ ಕೈಗೊಂಡ ನಂತರ ಪಾಕಿಸ್ತಾನ ಭಾರೀ ನಷ್ಟವನ್ನು ಅನುಭವಿಸಿದೆ. ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಭಾರತೀಯ ಸೇನೆಯ ಕರ್ನಲ್ ಸೂಫಿಯಾ ಖುರೇಷಿ, ಭಾರತ ವಿರೋಧಿ ಚಟುವಟಿಕೆಗಳಿಗೆ ಬಳಸಲಾಗುತ್ತಿರುವ ಭಯೋತ್ಪಾದಕ ಶಿಬಿರಗಳು ಮತ್ತು ಸೌಲಭ್ಯಗಳನ್ನು ಗುರಿಯಾಗಿರಿಸಿಕೊಂಡು ಭಾರತ ಕಾರ್ಯಾಚರಣೆಗಳನ್ನು ನಡೆಸಿದೆ ಎಂದು ಹೇಳಿದರು. ಪಾಕಿಸ್ತಾನ, ತಪ್ಪು ಮಾಹಿತಿಯನ್ನು ಪ್ರಚಾರ ಮಾಡಲು ಹಲವಾರು ಪ್ರಯತ್ನಗಳನ್ನು ಮಾಡಿದೆ ಮತ್ತು ಭಾರತದ ಎಸ್-೪೦೦ ಮತ್ತು ಬ್ರಹ್ಮೋಸ್ ಕ್ಷಿಪಣಿ ನೆಲೆಯನ್ನು ತನ್ನ ಜೆ-ಎಫ್ ೧೭ ರೊಂದಿಗೆ ನಾಶಪಡಿಸಿದೆ ಎಂಬ ಪಾಕಿಸ್ತಾನದ ಹೇಳಿಕೆಯು ಸಂಪೂರ್ಣವಾಗಿ ಕಟ್ಟುಕಥೆಯಾಗಿದೆ ಎಂದು ಅವರು ಹೇಳಿದರು.

**ಧ್ವನಿ - ಸೋಫಿಯಾ ಖುರೇಷಿ ( ೪೮ ಸೆಕೆಂಡ್ಸ್)**

ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ವಾಯುಪಡೆಯ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್, ಸಿರ್ಸಾ, ಜಮ್ಮು, ಪಠಾಣ್‌ಕೋಟ್, ಭಟಿಂಡಾ, ನಲಿಯಾ ಮತ್ತು ಭುಜ್‌ನಲ್ಲಿರುವ ಭಾರತದ ವಾಯುನೆಲೆಗಳು ಹಾನಿಗೊಳಗಾಗಿವೆ ಎಂಬ ಪಾಕಿಸ್ತಾನದ ತಪ್ಪು ಮಾಹಿತಿಯನ್ನು ತಳ್ಳಿಹಾಕಿದರು. ಏತನ್ಮಧ್ಯೆ, ಪಹಲ್ಗಾಮ್‌ನಲ್ಲಿ ನಡೆದ ಭೀಕರ ಘಟನೆಗಳ ನಂತರ, ಭಾರತ ಹಲವು ವಿಷಯಗಳನ್ನು ಗಮನದಲ್ಲಿಟ್ಟುಕೊಂಡು ಜವಾಬ್ದಾರಿಯುತವಾಗಿ ಪ್ರತಿಕ್ರಿಯಿಸಿದೆ ಎಂದು ನೌಕಾಪಡೆಯ ಕಮೋಡೊರ್ ರಘು ನಾಯರ್ ಹೇಳಿದರು. ಉಭಯ ರಾಷ್ಟ್ರಗಳ ನಡುವಿನ ಒಪ್ಪಂದಕ್ಕೆ ಭಾರತ ಬದ್ಧವಾಗಿರಲಿದೆ ಆದರೆ ಭವಿಷ್ಯದಲ್ಲಿ ಯಾವುದೇ ಉಲ್ಲಂಘನೆ ಅಥವಾ ಪರಿಸ್ಥಿತಿ ಉಲ್ಬಣಕ್ಕೆ ಎದುರಾಳಿ ಕ್ರಮ ವಹಿಸಿದರೆ ಅದಕ್ಕೆ, ತಕ್ಕ ನಿರ್ಣಾಯಕ ಪ್ರತಿಕ್ರಿಯೆಯನ್ನು ನೀಡಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

<><*<><>*><>

ಭಾರತದ ಪ್ರತಿದಾಳಿಗೆ ಆತಂಕಕ್ಕೊಳಗಾಗಿರುವ ಪಾಕಿಸ್ತಾನ ಈಗ ತಪ್ಪು ಮಾಹಿತಿಯನ್ನು ಹರಡಿ ಜನರನ್ನು ದಾರಿ ತಪ್ಪಿಸಲು ಯತ್ನಿಸುತ್ತಿದೆ.

ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ನಕಲಿ ವೀಡಿಯೊಗಳು, ತಿರುಚಿದ ಚಿತ್ರಗಳೊಂದಿಗೆ ಮಾಧ್ಯಮಗಳು ಹಾಗೂ ಸಾರ್ವಜನಿಕರನ್ನು ದಾರಿತಪ್ಪಿಸುವ ಹತಾಷೆಯ ಕ್ರಮಕ್ಕೆ ಕೈ ಹಾಕಿದೆ.

ಈ ನಿರ್ಣಾಯಕ ಸಮಯದಲ್ಲಿ ಪ್ರತಿಯೊಂದು ಮಾಹಿತಿಯನ್ನು ಎಚ್ಚರಿಕೆಯಿಂದ ಪರಿಶೀಲಿಸುವುದು ಬಹಳ ಮುಖ್ಯ. ಸಂಶಯಾಸ್ಪದ ವಿಷಯವನ್ನು, ವಿಶೇಷವಾಗಿ ಭಾರತೀಯ ಸಶಸ್ತ್ರ ಪಡೆಗಳ ಬಗ್ಗೆ ಅಥವಾ ಪ್ರಸ್ತುತ ಪರಿಸ್ಥಿತಿಗೆ ಸಂಬಂಧಿಸಿದ ಯಾವುದೇ ಮಾಹಿತಿಯನ್ನು ಪಿಐಬಿ ಫ್ಯಾಕ್ಟ್ ಚೆಕ್‌ಗೆ ವರದಿ ಮಾಡಬೇಕು. ನೀವು ಅಂತಹ ವಿಷಯವನ್ನು ವಾಟ್ಸಾಪ್ ಸಂಖ್ಯೆ ೮೭೯೯೭-೧೧೨೫೯ ಮತ್ತು ಇಮೇಲ್ ಐಡಿ - factcheck@pib.gov.in ನಲ್ಲಿಯೂ ಹಂಚಿಕೊಳ್ಳಬಹುದು.

**<><*<><>*><>**

ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದವನ್ನು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರು ಉದ್ವಿಗ್ನತೆಯನ್ನು ಕಡಿಮೆ ಮಾಡುವ ಸಕಾರಾತ್ಮಕ ಹೆಜ್ಜೆ ಮತ್ತು ಇದು ಶಾಶ್ವತ ಶಾಂತಿಗೆ ಕೊಡುಗೆ ನೀಡುತ್ತದೆ ಎಂದು ಹೇಳಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಆಂಟೋನಿಯೊ ಗುಟೆರೆಸ್ ಅವರ ವಕ್ತಾರ ಸ್ಟೀಫನ್ ಡುಜಾರಿಕ್, ಪ್ರಸ್ತುತ ಉದ್ವಿಗ್ನತೆಯನ್ನು ಕಡಿಮೆ ಮಾಡುವ ಸಕಾರಾತ್ಮಕ ಹೆಜ್ಜೆಯಾಗಿ ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದವನ್ನು ಗುಟೆರೆಸ್ ಸ್ವಾಗತಿಸುತ್ತಾರೆ ಎಂದು ಹೇಳಿದ್ದಾರೆ. ಈ ಒಪ್ಪಂದ ಎರಡೂ ದೇಶಗಳ ನಡುವಿನ ದೀರ್ಘಕಾಲೀನ ಸಮಸ್ಯೆಗಳನ್ನು ಪರಿಹರಿಸಲು ಅನುಕೂಲಕರ ವಾತಾವರಣವನ್ನು ಬೆಳೆಸುತ್ತದೆ. ಶಾಂತಿ ಮತ್ತು ಸ್ಥಿರತೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಪ್ರಯತ್ನಗಳನ್ನು ಬೆಂಬಲಿಸಲು ವಿಶ್ವಸಂಸ್ಥೆ ಸಿದ್ಧವಾಗಿದೆ" ಎಂದು ಡುಜಾರಿಕ್ ಹೇಳಿದರು.

**<><*<><>*><>**

ಭಾರತೀಯ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ನಿನ್ನೆ ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. "ಯುದ್ಧ ಭಾರತದ ಆಯ್ಕೆಯಲ್ಲ" ಎಂದು ಪುನರುಚ್ಚರಿಸಿದ ಅವರು, ಪಾಕಿಸ್ತಾನದೊಂದಿಗೆ ಕದನ ವಿರಾಮ ಮತ್ತು ಶಾಂತಿಯನ್ನು ಪುನಃಸ್ಥಾಪಿಸುವ ಭಾರತದ ಬದ್ಧತೆಯನ್ನು ಒತ್ತಿ ಹೇಳಿದರು.

ಚೀನಾದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಬಹಿರಂಗಪಡಿಸಿದ ಸಂಭಾಷಣೆಯ ಪ್ರಕಾರ ಪ್ರಾದೇಶಿಕ ಸ್ಥಿರತೆ ಮತ್ತು ಭಾರತ-ಪಾಕಿಸ್ತಾನ ಉದ್ವಿಗ್ನತೆ ಹೆಚ್ಚುತ್ತಿರುವ ನಡುವೆ ಶಾಂತಿಯನ್ನು ಕಾಪಾಡಿಕೊಳ್ಳುವ ಮೇಲೆ ಕೇಂದ್ರೀಕರಿಸಿದೆ.

ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ದಾಳಿಯನ್ನು ಖಂಡಿಸಿದ್ದು, ಎಲ್ಲಾ ರೀತಿಯ ಭಯೋತ್ಪಾದನೆಗೆ ಚೀನಾದ ದೃಢ ವಿರೋಧವನ್ನು ಪುನರುಚ್ಚರಿಸಿದ್ದಾರೆ.

**<><*<><>*><>**

ಭಾರತ-ಪಾಕಿಸ್ತಾನ ನಡುವೆ ಕದನ ವಿರಾಮ ಒಪ್ಪಂದ ಬೆನ್ನಲ್ಲೆ ಸ್ಥಗಿತಗೊಂಡಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯನ್ನು ಪುನರಾಂಭಿಸುವ ಕುರಿತಂತೆ ಹಾಗೂ ಪರಿಷ್ಕೃತ ವೇಳಾಪಟ್ಟಿ ಪ್ರಕಟಿಸುವ ಕುರಿತಂತೆ ಭಾರತೀಯ ಕ್ರಿಕೆಟ್ ನಿಯಂತ್ರಣಾ ಮಂಡಳಿ- ಬಿಸಿಸಿಐ ಮಂಡಳಿಯ ಅಧಿಕಾರಿಗಳು ಮತ್ತು ಐಪಿಎಲ್ ಆಡಳಿತ ಮಂಡಳಿ ಅಧಿಕಾರಿಗಳು ಇಂದು ಸಭೆ ನಡೆಸಲಿದ್ದಾರೆ ಎಂದು ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ ಹೇಳಿದ್ದಾರೆ.

ಪಂದ್ಯಾವಳಿಯಲ್ಲಿ ಇನ್ನೂ ೧೬ ಪಂದ್ಯಗಳ ಬಾಕಿ ಉಳಿದಿವೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**